All India Radio: Bangalore
Regional Bulletin In Kannada
12.07.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ದೇಶಾದ್ಯಂತ ೪೭ ಸ್ಥಳಗಳಲ್ಲಿ ಇಂದು ಉದ್ಯೋಗ ಮೇಳ ; ಹುಬ್ಬಳ್ಳಿಯಲ್ಲಿ ಪ್ರಲ್ಹಾದ್ ಜೋಶಿ, ಬೆಂಗಳೂರಿನಲ್ಲಿ ಶೋಭಾ ಕರಂದ್ಲಾಜೆ ಚಾಲನೆ
- ಶಕ್ತಿ ಯೋಜನೆಯಡಿ ೫೦೦ ಕೋಟಿ ದಾಟಿದ ಫಲಾನುಭವಿಗಳ ಸಂಖ್ಯೆ ; ನಾಡಿದ್ದು ಸಂಭ್ರಮಾಚರಣೆ
- ರಾಜ್ಯದ ೧೦ ಮಹಾನಗರ ಪಾಲಿಕೆಗಳಲ್ಲಿ ಸಿಬ್ಬಂದಿ ಪ್ರತಿಭಟನೆ ; ಸೇವೆ ಸ್ಥಗಿತ ; ಸರ್ಕಾರದ ವಿರುದ್ಧ ಬಿಜೆಪಿ ಅಸಮಾಧಾನ
- ಮಂಗಳೂರಿನ ಎಂಆರ್‌ಪಿಎಲ್ ಸಂಸ್ಕರಣಾ ಘಟಕದಲ್ಲಿ ಅನಾಹುತ ; ಕಾರ್ಮಿಕರಿಬ್ಬರ ಸಾವು

<><><><>

ಉದ್ಯೋಗ ಸಂಬಂಧಿತ ಪ್ರೋತ್ಸಾಹಕ ಯೋಜನೆ, ಮೂರೂವರೆ ಕೋಟಿಗೂ ಅಧಿಕ ಉದ್ಯೋಗ ಸೃಷ್ಟಿಸಲಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಅವರು, ೧೬ನೇ ರೋಜ್‌ಗಾರ್ ಉದ್ಯೋಗ ಮೇಳದಲ್ಲಿ ಇಂದು ವಿಡಿಯೋ ಕಾನ್ಫರೆನ್ಸ್ ಮೂಲಕ ಪಾಲ್ಗೊಂಡು ೫೧ ಸಾವಿರಕ್ಕೂ ಹೆಚ್ಚು ಅಭ್ಯರ್ಥಿಗಳಿಗೆ ನೇಮಕಾತಿ ಪತ್ರ ವಿತರಿಸಿ ಮಾತನಾಡಿದರು. ದೇಶದ ೪೭ ಸ್ಥಳಗಳಲ್ಲಿ ಇಂದು ರೋಜ್‌ಗಾರ್ ಮೇಳವನ್ನು ಆಯೋಜಿಸಲಾಗಿತ್ತು. ದೇಶಾದ್ಯಂತ ಆಯ್ಕೆಯಾದ ಅಭ್ಯರ್ಥಿಗಳು ರೈಲ್ವೆ, ಗೃಹ ವ್ಯವಹಾರಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಕಾರ್ಮಿಕ ಮತ್ತು ಉದ್ಯೋಗ ಹಾಗೂ ಅಂಚೆ ಇಲಾಖೆ ಸೇರಿದಂತೆ ಇತರೆ ಇಲಾಖೆಗಳು ಮತ್ತು ಸಚಿವಾಲಯಗಳಿಗೆ ಸೇರಲಿದ್ದಾರೆ.

<><><><>

ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ವರ್ಚುವಲ್ ಮೂಲಕ ನಡೆದ ಈ ಕಾರ್ಯಕ್ರಮದಲ್ಲಿ ಹುಬ್ಬಳ್ಳಿಯಿಂದ ಸೇರ್ಪಡೆಯಾಗಿ ಪಾಲ್ಗೊಂಡರು. ಕೇಶ್ವಾಪುರದ ಆಫೀಸರ್ಸ್ ಕ್ಲಬ್ ನಲ್ಲಿ ನೈರುತ್ಯ

ರೈಲ್ವೆ ಸಹಯೋಗದಲ್ಲಿ ಆಯೋಜಿಸಿದ್ದ ರೋಜಗಾರ್ ಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು. ರೋಜ್‌ಗಾರ್ ಮೇಳದ ಮೂಲಕ ೧೦ ವರ್ಷದಲ್ಲಿ ೧೦ ಲಕ್ಷ ಉದ್ಯೋಗ ನೀಡುವ ಗುರಿಯನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಹೊಂದಿದ್ದು, ಅದರಂತೆ ರೋಜಗಾರ ಮೇಳದಲ್ಲಿ ಹೊಸದಾಗಿ ನೇಮಕಾತಿ ಹೊಂದಿದ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರವನ್ನು ವಿತರಣೆ ಮಾಡಲಾಗುತ್ತಿದೆ. ಇಪಿಎಫ್‌ಒನಲ್ಲಿ ೨೩ ಕೋಟಿ ೭೩ ಲಕ್ಷ ಹೊಸ ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡಿದ್ದಾರೆ. ಸರ್ಕಾರಿ ಕಚೇರಿಗಳು, ಸಂಸ್ಥೆಗಳು ಸೇರಿದಂತೆ ವಿವಿಧ ವಲಯಗಳಲ್ಲಿ ಹೊಸದಾಗಿ ನೇಮಕಾತಿ ಹೊಂದಿದ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರಗಳನ್ನು ರೋಜಗಾರ್ ಮೇಳ ಕಾರ್ಯಕ್ರಮಗಳ ಮೂಲಕ ವಿತರಿಸಲಾಗುತ್ತಿದೆ. ಇದುವರೆಗೆ ಸುಮಾರು ೭.೭೨ ಲಕ್ಷ ಉದ್ಯೋಗ ಪತ್ರಗಳನ್ನು ಅಭ್ಯರ್ಥಿಗಳಿಗೆ ನೀಡಲಾಗಿರುತ್ತದೆ. ಅಲ್ಲದೇ ಹೊಸ ಉದ್ಯೋಗ ಒದಗಿಸುವ ನಿಟ್ಟಿನಲ್ಲಿ ಕ್ರಮ ವಹಿಸಲಾಗುವುದು. ಆ ಮೂಲಕ ನಿರುದ್ಯೋಗ ಸಮಸ್ಯೆಯನ್ನು ಹೋಗಲಾಡಿಸಲಾಗುವುದು ಎಂದು ಅವರು ತಿಳಿಸಿದರು. ಹೊಸದಾಗಿ ನೇಮಕಾತಿ ಹೊಂದಿದ ಅಭ್ಯರ್ಥಿಗಳು ಜನರೊಂದಿಗೆ ಸೌಜನ್ಯದಿಂದ ವರ್ತಿಸಬೇಕು. ಒಳ್ಳೆಯ ಕೆಲಸಕ್ಕೆ ಆದ್ಯತೆ ನೀಡಬೇಕು ಎಂದು ಅವರು ಹಾರೈಸಿದರು

ಬೈಟ್: ಪ್ರಹ್ಲಾದ ಜೋಶಿ

ಇದೇ ಸಂದರ್ಭದಲ್ಲಿ ಹೊಸದಾಗಿ ನೇಮಕಾತಿ ಹೊಂದಿದ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರಗಳನ್ನು ವಿತರಣೆ ಮಾಡಲಾಯಿತು.

<><><><>

ಬೆಂಗಳೂರಿನಲ್ಲಿ ಆಯೋಜಿಸಲಾಗಿದ್ದ ೧೬ನೇ ಬೃಹತ್ ಉದ್ಯೋಗ ಮೇಳವನ್ನು ಕೇಂದ್ರ ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ದೇಶದ ಅಭಿವೃದ್ಧಿಯಲ್ಲಿ ಯುವಕರ ಪಾತ್ರ ಅತ್ಯಂತ ಮಹತ್ವದ್ದು, ೨೦೪೭ರ ವೇಳೆ ದೇಶವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿಸುವಲ್ಲಿ ಯುವಕರ ಕೊಡುಗೆ ನಿರ್ಣಾಯಕವಾಗಿದೆ ಎಂದು ಹೇಳಿದ್ದಾರೆ.

<><><><>

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಶಕ್ತಿ ಯೋಜನೆಯ ಫಲಾನುಭವಿಗಳ ಸಂಖ್ಯೆ ೫೦೦ ಕೋಟಿ ದಾಟಿರುವುದರಿಂದ, ನಾಡಿದ್ದು ಚಿಕ್ಕಬಳ್ಳಾಪುರ ನಗರದಲ್ಲಿ

ಸಂಭ್ರಮಾಚರಣೆ ಆಯೋಜಿಸಲಾಗಿದೆ. ರಾಜ್ಯ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಹೆಚ್.ಎಂ.ರೇವಣ್ಣ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಬಸ್‌ಗೆ ಪೂಜೆ ಸಲ್ಲಿಸಿ ನಂತರ ಬಸ್ ನಿಲ್ದಾಣದ ಪ್ರಯಾಣಿಕರು ಹಾಗೂ ಶಕ್ತಿ ಯೋಜನೆಯ ಫಲಾನುಭವಿಗಳಿಗೆ ಸಿಹಿ ಹಂಚಲಿದ್ದಾರೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಯಲುವಳ್ಳಿ ರಮೇಶ್ ತಿಳಿಸಿದ್ದಾರೆ. ಶಕ್ತಿ ಯೋಜನೆಯಡಿ ೫೦೦ ಕೋಟಿ ಟಿಕೆಟ್ ಗಳ ಭಾಗವಾಗಿ ಮಹಿಳೆಯರು ಪ್ರಯಾಣಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಇದೇ ೧೪ ರಂದು ರಾಜ್ಯದ ಎಲ್ಲಾ ಸರ್ಕಾರಿ ಬಸ್ ನಿಲ್ದಾಣಗಳಲ್ಲಿ ಬಸ್ ಗೆ ಪೂಜೆ ಸಲ್ಲಿಸಿ ಪ್ರಯಾಣಿಕರಿಗೆ ಸಿಹಿ ಹಂಚಲು ಸಾರಿಗೆ ಸಚಿವರು ಸೂಚಿಸಿರುವುದಾಗಿ ಅವರು ತಿಳಿಸಿದ್ದಾರೆ.

<><><>

ಕೋಲಾರ ಜಿಲ್ಲೆಯಲ್ಲಿ ಹೊಸದಾಗಿ ರೂಪುಗೊಂಡಿರುವ ವೇಮಗಲ್-ಕುರುಗಲ್ ಪಟ್ಟಣ ಪಂಚಾಯಿತಿಯ ೧೭ ಸ್ಥಾನಗಳಿಗೆ ಆಗಸ್ಟ್ ೧೭ ರಂದು ಚುನಾವಣೆ ನಡೆಸಲು ರಾಜ್ಯ ಚುನಾವಣಾ ಆಯೋಗ ವೇಳಾಪಟ್ಟಿ ಪ್ರಕಟಿಸಿದೆ.

ಪಟ್ಟಣ ಪಂಚಾಯಿತಿ ರಚನೆಯಾದ ನಂತರ ಮೊದಲ ಚುನಾವಣೆ ಇದಾಗಿದೆ. ಹೊಸದಾಗಿ ರಚಿಸಲಾಗಿರುವ ಪಟ್ಟಣ ಪಂಚಾಯಿತಿಗೆ ಇದೇ ೨೯ ರಂದು ಜಿಲ್ಲಾಧಿಕಾರಿ ಚುನಾವಣಾ ಅಧಿಸೂಚನೆ ಪ್ರಕಟಿಸಲಿದ್ದು ನಾಮಪತ್ರ ಸಲ್ಲಿಸಲು ಆಗಸ್ಟ್ ೫ ಕೊನೆಯ ದಿನ, ಆಗಸ್ಟ್ ೬ ನಾಮಪತ್ರ ಪರಿಶೀಲನೆ, ನಾಮಪತ್ರ ಹಿಂಪಡೆಯಲು ಅಗಸ್ಟ್ ೮ ಕೊನೆಯ ದಿನವಾಗಿದೆ. ಆಗಸ್ಟ್ ೧೭ ರ ಭಾನುವಾರದಂದು ಬೆಳಿಗ್ಗೆ ೭ ಗಂಟೆಯಿಂದ ಸಂಜೆ ೫ ಗಂಟೆವರೆಗೂ ಮತದಾನ ನಡೆಯಲಿದ್ದು, ತಾಲ್ಲೂಕು ಕೇಂದ್ರವಾದ ಕೋಲಾರದಲ್ಲಿ ಆಗಸ್ಟ್ ೨೦ ರಂದು ಬೆಳಗ್ಗೆ ೮ ಗಂಟೆಗೆ ಮತ ಎಣಿಕೆ ನಡೆಯಲಿದೆ. ಇದೇ ೨೯ರಂದು ಅಧಿಸೂಚನೆ ಪ್ರಕಟಗೊಂಡ ದಿನದಿಂದ ಮತ ಎಣಿಕೆ ನಡೆಯುವ ಆಗಸ್ಟ್ ೨೦ ರವರೆಗೆ ಚುನಾವಣಾ ನೀತಿ ಸಂಹಿತೆಯು ಚುನಾವಣೆ ನಡೆಯುವ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಮಾತ್ರ ಜಾರಿಯಲ್ಲಿರುತ್ತದೆ ಎಂದು ಅಧಿಕೃತವಾಗಿ ತಿಳಿಸಲಾಗಿದೆ.

<><><>

ರಾಜ್ಯ ಹತ್ತು ಮಹಾನಗರ ಪಾಲಿಕೆಗಳ ಸಿಬ್ಬಂದಿ ಕಳೆದ ಐದು ದಿನಗಳಿಂದ ಸಾಮೂಹಿಕ ರಜೆ ಹಾಕಿ ಪ್ರತಿಭಟನೆ ನಡೆಸುತ್ತಿದ್ದಾರೆ. ೭ನೇ ವೇತನ ಆಯೋಗದ ಸೌಲಭ್ಯ, ಜ್ಯೋತಿ ಸಂಜೀವಿನಿ

ಯೋಜನೆ, ಹುದ್ದೆ ಭರ್ತಿ ಮುಂತಾದ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಅವರು ಪ್ರತಿಭಟಿಸುತ್ತಿದ್ದಾರೆ. ಹುಬ್ಬಳ್ಳಿ-ಧಾರವಾಡ ಪಾಲಿಕೆ ಸೇರಿದಂತೆ ಪಾಲಿಕೆಗಳಲ್ಲಿ ಸೇವೆಗಳು ಸ್ಥಗಿತಗೊಂಡಿವೆ. ಈ ಕುರಿತಂತೆ ಸಾಮಾಜಿ ಜಾಲ ತಾಣದಲ್ಲಿ ಪ್ರತಿಕ್ರಿಯಿಸಿರುವ ಪ್ರತಿಪಕ್ಷ ನಾಯಕ ಆರ್.ಅಶೋಕ, ರಾಜ್ಯಾದ್ಯಂತ ೧೦ ಪಾಲಿಕೆಗಳ ೨೫,೦೦೦ಕ್ಕೂ ಹೆಚ್ಚು ಸಿಬ್ಬಂದಿ ೫ ದಿನಗಳಿಂದ ಮಾಡುತ್ತಿರುವ ಮುಷ್ಕರ ಸರ್ಕಾರದ ಕಣ್ಣಿಗೆ ಕಾಣುತ್ತಿಲ್ಲ ಎಂದು ದೂರಿದ್ದಾರೆ. ಸರ್ಕಾರದ ಯಾವ ಮಂತ್ರಿಗಳೂ ಇದುವರೆಗೂ ಪ್ರತಿಭಟನಾ ನಿರತ ಪಾಲಿಕೆ ಸಿಬ್ಬಂದಿ ಭೇಟಿ ಮಾಡುವ ಗೋಜಿಗೇ ಹೋಗಿಲ್ಲ ಎಂದು ಅವರು ಆರೋಪಿಸಿದ್ದಾರೆ.

<><><><>

ಮಂಗಳೂರಿನ ಬೈಕಂಪಾಡಿಯಲ್ಲಿರುವ ಎಂಆರ್‌ಪಿಎಲ್ ಸಂಸ್ಕರಣಾ ಘಟಕದಲ್ಲಿ ಇಂದು ಸಂಭವಿಸಿದ ಅನಾಹುತದಲ್ಲಿ ಇಬ್ಬರು ಕಾರ್ಮಿಕರು ಮೃತಪಟ್ಟಿದ್ದಾರೆ. ಇನ್ನೋರ್ವ ಕಾರ್ಮಿಕ ಗಾಯಗೊಂಡಿದ್ದು, ಚಿಕಿತ್ಸೆಗಾಗಿ ಆಸ್ಪತ್ರೆಗೆ ಸೇರಿಸಲಾಗಿದೆ. ಎಂಆರ್‌ಪಿಎಲ್ ನ ಸಲ್ಫರ್ ಸಂಗ್ರಹಣಾ ತೊಟ್ಟಿಯಲ್ಲಿ ಕಂಡು ಬಂದ ಸಮಸ್ಯೆ ಪರಿಶೀಲನೆಗೆ ಕಾರ್ಮಿಕರು ತೆರಳಿದ ಸಂದರ್ಭದಲ್ಲಿ ಈ ಘಟನೆ ನಡೆದಿದೆ ಎಂದು ಹೇಳಲಾಗಿದೆ. ಸ್ಥಳಕ್ಕೆ ತಹಶೀಲ್ದಾರ್ ಸೇರಿದಂತೆ ಹಿರಿಯ ಅಧಿಕಾರಿಗಳು ಭೇಟಿ ನೀಡಿದ್ದು, ಪರಿಶೀಲನೆ ನಡೆಸುತ್ತಿದ್ದಾರೆ.

<><><><>

ಚಿಕ್ಕಬಳ್ಳಾಪುರ ಜಿಲ್ಲೆಯ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ನಾಯಿ ಮತ್ತು ಹಾವು ಕಡಿತಕ್ಕೆ ಅಗತ್ಯವಿರುವ ಔಷಧಗಳು ಲಭ್ಯವಿದ್ದು, ಸಾರ್ವಜನಿಕರು ಇಂತಹ ಆಕಸ್ಮಿಕ ತುರ್ತು ಸಂದರ್ಭಗಳಲ್ಲಿ ತಕ್ಷಣ ಸೂಕ್ತ ಚಿಕಿತ್ಸೆ ಪಡೆಯಬೇಕೆಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಕೋರಿದ್ದಾರೆ. ಜಿಲ್ಲಾಡಳಿತ ಭವನದಲ್ಲಿ ನಡೆದ ಆರೋಗ್ಯ ಇಲಾಖೆಯ ಜಿಲ್ಲಾ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ೨೦೨೫ ನೇ ಸಾಲಿನಲ್ಲಿ ೫ ಸಾವಿರದ ೮೯೦ ಜನರಿಗೆ ನಾಯಿ ಕಚ್ಚಿರುವುದು ದಾಖಲಾಗಿದೆ. ಈ ಪೈಕಿ ೪೬ ವರ್ಷದ ಮಹಿಳೆಯೊಬ್ಬರು ರೇಬಿಸ್ ಸೋಂಕಿನಿಂದ ಸಾವನ್ನಪ್ಪಿರುವುದು ದೃಢಪಟ್ಟಿದೆ. ಇನ್ನು ಇದೇ ಸಾಲಿನಲ್ಲಿ ೪೦೪ ಜನರು ಹಾವು ಕಡಿತಕ್ಕೆ ಒಳಗಾಗಿದ್ದು, ಈ ಪೈಕಿ ಇಬ್ಬರು ಸಾವನ್ನಪ್ಪಿದ್ದಾರೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

<><><><>

ಮೈಸೂರಿನ ಕೇಂದ್ರೀಯ ಪೆಟ್ರೋಕೆಮಿಕಲ್ಸ್ ಎಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಶಿಕ್ಷಣ ಸಂಸ್ಥೆಯಲ್ಲಿ ಉದ್ಯೋಗಾಧಾರಿತ ಕೋರ್ಸ್‌ಗಳಿಗಾಗಿ ದಾಖಲಾತಿ ಆರಂಭವಾಗಿದ್ದು, ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಉತ್ತೀರ್ಣಗೊಂಡ ವಿದ್ಯಾರ್ಥಿಗಳು ಪ್ರವೇಶ ಪಡೆಯಬಹುದಾಗಿದೆ ಎಂದು ಸಂಸ್ಥೆಯ ಸಹಾಯಕ ತಾಂತ್ರಿಕ ಅಧಿಕಾರಿ ಲಕ್ಷ್ಮಣ್ ತಿಳಿಸಿದರು. ದಾವಣಗೆರೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡಿಪ್ಲೋಮಾ ಇನ್ ಪ್ಲಾಸ್ಟಿಕ್ ಟೆಕ್ನಾಲಜಿ ಮತ್ತು ಡಿಪ್ಲೋಮಾ ಇನ್ ಪ್ಲಾಸ್ಟಿಕ್ ಮೌಲ್ಡ್ ಟೆಕ್ನಾಲಜಿ ಕೋರ್ಸ್ ಗಳಿಗೆ ಪ್ರವೇಶಾತಿ ಆರಂಭಗೊಂಡಿದ್ದು, ೧೨೦ ವಿದ್ಯಾರ್ಥಿಗಳಿಗೆ ಮಾತ್ರ ಅವಕಾಶ ಕಲ್ಪಿಸಲಾಗಿದೆ ಎಂದರು.

<><><><>

ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಮಾತೃಗೊಂದು ಮರ-ಸಹಸ್ರ ಸಹಸ್ರ ಗಿಡನೆಡುವ ಅಭಿಯಾನವನ್ನು ನಾಳೆ ನಾಗಮಂಗಲದ ಕಾಚೇನಹಳ್ಳಿ-ಅಂಕುಶಾಪುರ ಗ್ರಾಮದಲ್ಲಿ ಆಯೋಜಿಸಲಾಗಿದೆ. ಕರ್ನಾಟಕ ಲೋಕಾಯುಕ್ತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಅರಣ್ಯ ಇಲಾಖೆ, ವಕೀಲರ ಸಂಘ ಹಾಗೂ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಈ ಕಾರ್ಯಕ್ರಮ ಏರ್ಪಡಿಸಲಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>